**Bangalore**
**Regional News**
**20.08.2025 / 6.40 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಒಳ ಮೀಸಲಾತಿ ಬಗ್ಗೆ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಅಧಿಕೃತ ಘೋಷಣೆ; ಎಡಗೈ ಹಾಗೂ ಬಲಗೈ ಸಮುದಾಯಕ್ಕೆ ತಲಾ ಶೇಕಡ ೬ರಂತೆ ಮೀಸಲಾತಿ

2. ಮೇಲ್ಮನೆಯಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ ವಿಧೇಯಕ ಮೂರು ಮತಗಳಿಂದ ತಿರಸ್ಕೃತ

3. ಉನ್ನತ ವ್ಯಾಸಂಗ ಮಾಡಲಿಚ್ಛಿಸುವ ಅನಾಥ ಮಕ್ಕಳ ಹಿತ ಕಾಯಲು ಸರ್ಕಾರ ಬದ್ಧ - ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

4. ಅವೈಜ್ಞಾನಿಕ ಗ್ಯಾರೆಂಟಿಗಳಿಂದ ರಾಜ್ಯದ ಆದಾಯ ಖೋತಾ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಗಂಭೀರ ಆರೋಪ

5. ಬೆಂಗಳೂರಿನಲ್ಲಿ ವ್ಹೀಲಿಂಗ್ ಮಾಡಿದರೆ ಲೈಸೆನ್ಸ್ ಖಾಯಂ ರದ್ದುಗೊಳಿಸುವಂತೆ ಜಿಲ್ಲಾಧಿಕಾರಿ ಸೂಚನೆ

<><><><>

ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ಕುರಿತಂತೆ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಿನ್ನೆ ನಡೆದ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯವನ್ನು ಅಧಿಕೃತವಾಗಿ ಘೋಷಿಸಿದ್ದಾರೆ. ಎಡಗೈ ಸಮುದಾಯಕ್ಕೆ ಶೇಕಡ ೬ ಹಾಗೂ ಬಲಗೈ ಸಮುದಾಯಕ್ಕೆ ಶೇಕಡ ೬ರಂತೆ ಮೀಸಲಾತಿ ನೀಡಲು ನಿರ್ಧರಿಸಲಾಗಿದೆ. ಸ್ಪೃಶ್ಯ ಸಮುದಾಯಕ್ಕೆ ಶೇಕಡ ೫ರಷ್ಟು ಮೀಸಲಾತಿ ನೀಡಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ. ಎಬಿಸಿ ಎಂದು ವರ್ಗೀಕರಣ ಮಾಡಿ ಮೀಸಲಾತಿ ಹಂಚಲಾಗಿದೆ. ಇದೇ ವೇಳೆ ಒಳ ಮೀಸಲಾತಿ ಹೋರಾಟಗಾರರ ಮೇಲಿನ ಮೊಕದ್ದಮೆ ಹಿಂಪಡೆಯಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ. ಪರಿಶಿಷ್ಟ ಜಾತಿಗಳಲ್ಲಿನ ಚಲನಶೀಲತೆಯನ್ನು ಹಾಗೂ ಲಭ್ಯವಾಗುವ ದತ್ತಾಂಶಗಳನ್ನು ಪರಿಶೀಲಿಸಿಕೊಂಡು, ಕಾಲಕಾಲಕ್ಕೆ ಈ ಜಾತಿಗಳನ್ನು ಅಧ್ಯಯನ ಮಾಡಿ ವರದಿ ನೀಡಲು ಶಾಶ್ವತ ಪರಿಶಿಷ್ಟ ಜಾತಿಗಳ ಆಯೋಗವನ್ನು ರಚಿಸಲು ನಿರ್ಧರಿಸಲಾಗಿದೆ. ಒಳ ಮೀಸಲಾತಿಯ ಕುರಿತಂತೆ ಆದೇಶ ಹೊರಡಿಸಿದ ಕೂಡಲೇ ನೇಮಕಾತಿ ಪ್ರಕ್ರಿಯೆಗಳನ್ನು ಪ್ರಾರಂಭಿಸಲು ಹಾಗೂ ಒಂದು ಬಾರಿಗೆ ವಯೋಮಿತಿ ಸಡಿಲಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದ್ದಾರೆ. ಸರ್ಕಾರವು ಈಗ ಕೈಗೊಂಡಿರುವ ತೀರ್ಮಾನದಲ್ಲಿ

ಯಾವುದಾದರೂ ಮಾರ್ಪಾಡುಗಳ ಅಗತ್ಯತೆ ಕಂಡುಬಂದರೆ ಅವುಗಳನ್ನು ಮುಂದಿನ ರಾಷ್ಟ್ರೀಯ ಜನಗಣತಿಯಲ್ಲಿನ ಅಂಕಿ-ಅಂಶಗಳನ್ನು ಆಧರಿಸಿ ಬದಲಾವಣೆಗೆ ಒಳಪಡಿಸುವ ಷರತ್ತಿಗೆ ಬದ್ಧವಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಸರ್ಕಾರದ ಈ ತೀರ್ಮಾನವು ಒಳ ಮೀಸಲಾತಿ ಕುರಿತ ದಶಕಗಳ ಹೋರಾಟಕ್ಕೆ ನ್ಯಾಯ ಕಲ್ಪಿಸುವಲ್ಲಿ ಯಶಸ್ವಿಯಾಗಿದೆ ಎಂದು ಸದನದಲ್ಲಿ ಪ್ರತಿಪಾದಿಸಿದ್ದಾರೆ.

<><><><>

ಕರ್ನಾಟಕ ಸೌಹಾರ್ದ ಸಹಕಾರಿ ವಿಧೇಯಕಕ್ಕೆ ಮೇಲ್ಮನೆಯಲ್ಲಿಂದು ತೀವ್ರ ಹಿನ್ನಡೆಯಾಗಿದೆ. ವಿಧೇಯಕಕ್ಕೆ ಬಿಜೆಪಿ ಸದಸ್ಯರು ವಿರೋಧ ವ್ಯಕ್ತಪಡಿಸಿ, ಮತಕ್ಕೆ ಹಾಕುವಂತೆ ಆಗ್ರಹಿಸಿದರು. ಈ ವೇಳೆ ಪ್ರತಿಪಕ್ಷ ಸದಸ್ಯರ ಕೋರಿಕೆಯಂತೆ ಸಭಾಪತಿ ಬಸವರಾಜ ಹೊರಟ್ಟಿ ಅವರು ಮತಕ್ಕೆ ಹಾಕಲು ಒಪ್ಪಿದರು. ಎರಡು ನಿಮಿಷಗಳ ಕಾಲ ಮಾತ್ರ ಕಲಾಪಕ್ಕೆ ಆಗಮಿಸಲು ಸದಸ್ಯರಿಗೆ ಅವಕಾಶ ನೀಡಲಾಯಿತು. ಬಳಿಕ ವಿಧೇಯಕವನ್ನು ಸಭಾಪತಿ ಮತಕ್ಕೆ ಹಾಕಿದಾಗ ವಿಧೇಯಕದ ವಿರುದ್ಧವಾಗಿ ಬಿಜೆಪಿ, ಜೆಡಿಎಸ್ ೧೬ ಹಾಗೂ ಪರವಾಗಿ ಕಾಂಗ್ರೆಸ್‌ನಿಂದ ೧೩ ಮತ ಚಲಾವಣೆಯಾಯಿತು. ಈ ಹಿನ್ನೆಲೆಯಲ್ಲಿ ಪರಿಷತ್‌ನಲ್ಲಿ ಕರ್ನಾಟಕ ಸೌಹಾರ್ದ ಸಹಕಾರಿ ಬಿಲ್ ತಿರಸ್ಕಾರಗೊಂಡಿದೆ.

<><><><>

ಉನ್ನತ ವ್ಯಾಸಂಗ ಮಾಡಲು ಇಚ್ಛಿಸುವ ಅನಾಥಮಕ್ಕಳ ಹಿತ ಕಾಯಲು ಸರ್ಕಾರ ಬದ್ಧವಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ. ಮೂಡಿಗೆರೆ ಶಾಸಕಿ ನಯನ ಮೋಟಮ್ಮ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಅನಾಥಾಶ್ರಮಗಳಲ್ಲಿ ಇರುವ ಮಕ್ಕಳಿಗೆ ಪದವಿ ಪೂರ್ವ ಶಿಕ್ಷಣದವರೆಗೂ ದಾಖಲಾತಿ ಬಗ್ಗೆ ಯಾವುದೇ ಸಮಸ್ಯೆ ಇರುವುದಿಲ್ಲ. ಉನ್ನತ ಶಿಕ್ಷಣಕ್ಕೆ ದಾಖಲಾಗುವ ಸಂದರ್ಭದಲ್ಲಿ ಸಾಮಾನ್ಯವರ್ಗದ ಇತರ ಮಕ್ಕಳಂತೆ ಈ ಮಕ್ಕಳನ್ನು ದಾಖಲಾತಿ ಮಾಡಲಾಗುತ್ತಿದೆ. ಮುಂಬರುವ ದಿನಗಳಲ್ಲಿ ಇಂಥ ಮಕ್ಕಳಿಗೆ ವಿಶೇಷ ರಿಯಾಯಿತಿ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಮಕ್ಕಳ ಹಿತದೃಷ್ಟಿಯಿಂದ ಸಮಾಜ ಕಲ್ಯಾಣ ಇಲಾಖೆ ಸಚಿವರೊಂದಿಗೆ ಚರ್ಚೆ ನಡೆಸಿ ಸೂಕ್ತ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><><><>

ಸರ್ಕಾರದ ಐದು ಅವೈಜ್ಞಾನಿಕ ಗ್ಯಾರೆಂಟಿ ಯೋಜನೆಗಳು ರಾಜ್ಯದ ಆದಾಯವನ್ನೇ ನುಂಗಿಬಿಟ್ಟಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸಾರಬರಾಜು ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದ್ದಾರೆ. ವಿಧಾನಸಭೆಯಲ್ಲಿ ಮಂಡಿಸಲಾದ ಸಿಎಜಿ ವರದಿ ಈ ವಾಸ್ತವವನ್ನು ಬಹಿರಂಗಪಡಿಸಿದೆ ಎಂದು ತಿಳಿಸಿದ್ದಾರೆ. ಅಧಿಕ ಆದಾಯದ ರಾಜ್ಯವಾಗಿದ್ದ ಕರ್ನಾಟಃದಲ್ಲಿ ಈಗ ಅವೈಜ್ಞಾನಿಕ

ಗ್ಯಾರೆಂಟಿಗಳಿಂದಾಗಿ ಆದಾಯದಲ್ಲಿ ಖೋತಾ ಕಂಡುಬಂದಿದೆ. ರಾಜ್ಯದ ಸಾಲ ೬೩ ಸಾವಿರ ಕೋಟಿಗೆ ಏರಿಕೆಯಾಗಿದೆ ಎಂದು ದೂರಿದ್ದಾರೆ.

<><><>

ಬೆಂಗಳೂರಿನ ರಸ್ತೆಗಳಲ್ಲಿ ವೀಲಿಂಗ್ ಮಾಡಿ ವಾಹನ ಚಲಾಯಿಸುವ ವ್ಯಕ್ತಿಗಳ ವಿರುದ್ಧ ದೂರು ದಾಖಲಿಸಿ ಲೈಸನ್ಸ್ ಅನ್ನು ಖಾಯಂ ಆಗಿ ರದ್ದುಗೊಳಿಸುವಂತೆ ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್ ಸಾರಿಗೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನಗರದಲ್ಲಿ ಮಕ್ಕಳು ರಸ್ತೆ ದಾಟುವಾಗ ಆಗುವ ಅಪಘಾತಗಳು ಹೆಚ್ಚಾಗಿದ್ದು ಎಲ್ಲಾ ಶಾಲೆಗಳಲ್ಲಿ ರಸ್ತೆ ಅಪಘಾತ ಕುರಿತು  ಜಾಗೃತಿ ಮೂಡಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಿಗೆ ಸೂಚಿಸಿದ್ದಾರೆ. ಮಕ್ಕಳು ರಸ್ತೆ ದಾಟುವಾಗ ಶಾಲೆಯ ಆಯಾಗಳೊಂದಿಗೆ ದಾಟುವುದು, ಶಾಲಾ ವಾಹನಗಳನ್ನು ಓಡಿಸುವ ಚಾಲಕರನ್ನು ಕಡ್ಡಾಯ ತಪಾಸಣೆ ಹಾಗೂ ವಾಹನದಲ್ಲಿ ಸೀಮಿತ ಸಂಖ್ಯೆಗಿಂತ ಹೆಚ್ಚಿನ ಮಕ್ಕಳನ್ನು ಕೊಂಡೊಯ್ಯದಂತೆ ಶಾಲೆಗಳು ಮುಂಜಾಗ್ರತೆ ವಹಿಸಬೇಕೆಂದು ನಿರ್ದೇಶನ ನೀಡಿದ್ದಾರೆ. ಅಪಘಾತ ನಿಯಂತ್ರಿಸಲು ಅಪಘಾತ ಸಂಭವಿಸುವ ಸ್ಥಳಗಳನ್ನು ಗುರುತಿಸಿ ಅಲ್ಲಿ ಬ್ಲಾಕ್ ಸ್ಪಾಟ್ ಸೂಚನಾ  ಫಲಕಗಳನ್ನು ಅಳವಡಿಸುವಂತೆ ತಿಳಿಸಿದ್ದಾರೆ.

<><><>

ಕೋಲಾರ ಜಿಲ್ಲೆಯ  ವೇಮಗಲ್-ಕುರುಗಲ್ ಪಟ್ಟಣ ಪಂಚಾಯಿತಿ ಚುನಾವಣೆಯ ಫಲಿತಾಂಶ ಪ್ರಕಟಗೊಂಡಿದ್ದು, ಎನ್‌ಡಿಎ ಮೇಲುಗೈ ಸಾಧಿಸಿದ್ದು, ಆಡಳಿತರೂಢ ಕಾಂಗ್ರೆಸ್ ಪಕ್ಷಕ್ಕೆ ಭಾರಿ ಹಿನ್ನಡೆಯಾಗಿದೆ. ಪಟ್ಟಣ ಪಂಚಾಯಿತಿಯ ೧೭ ಸ್ಥಾನದ ಪೈಕಿ ಕಾಂಗ್ರೆಸ್ ೬, ಜೆಡಿಎಸ್ ೪, –ಬಿಜೆಪಿ ೬  ಹಾಗೂ ಪಕ್ಷೇತರ ಒಬ್ಬ ಸದಸ್ಯರು ಜಯಗಳಿಸಿದ್ದಾರೆ. ಎನ್‌ಡಿಎ ಕೂಟವು ೧೦ ಸ್ಥಾನಗಳನ್ನು ಗಳಿಸುವ ಮೂಲಕ ಬಹುಮತ ಪಡೆದುಕೊಂಡಿದೆ. ಐದು ವರ್ಷಗಳ ನಂತರ ಮೊದಲ ಬಾರಿಗೆ ವೇಮಗಲ್- ಕುರುಗಲ್ ಪಟ್ಟಣ ಪಂಚಾಯಿತಿಗೆ ನಡೆದ ಚುನಾವಣೆಯನ್ನು ಕಾಂಗ್ರೆಸ್, ಜೆಡಿಎಸ್ ಹಾಗೂ -ಬಿಜೆಪಿ ಪಕ್ಷಗಳು ಪ್ರತಿಷ್ಠೆಯಾಗಿ ತೆಗೆದುಕೊಂಡಿದ್ದವು.

<><><>

ಉಡುಪಿಯಲ್ಲಿ ಮೀನುಗಾರಿಕೆ ಇಲಾಖೆಯ ವತಿಯಿಂದ ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯ ಮೋಟಾರೀಕೃತ ನಾಡದೋಣಿಗಳನ್ನು ಭೌತಿಕವಾಗಿ ಪರಿಶೀಲಿಸಲಾಗುವುದು ಎಂದು ಜಿಲ್ಲಾಡಳಿತ ತಿಳಿಸಿದೆ. ಮೀನುಗಾರಿಕೆ ಪರವಾನಿಗೆ ಹಾಗೂ ಸೀಮೆ ಎಣ್ಣೆ ರಹದಾರಿ ನೀಡಲು ಕ್ರಮಕೈಗೊಳ್ಳಲಾಗಿತ್ತಿದ್ದು, ಆಗಸ್ಟ್ ತಿಂಗಳಿನಿಂದ ಕೈಗಾರಿಕಾ ಸೀಮೆ ಎಣ್ಣೆಯನ್ನು ಪೂರೈಸಲು ಪೂರ್ವಸಿದ್ಧತೆ ಮಾಡಿಕೊಳ್ಳುವ ಉದ್ದೇಶದಿಂದ ಇದೇ ೨೫ ರಂದು ಹಾಗೂ ೨೬ರಂದು ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಭೌತಿಕ ತಪಾಸಣೆ ನಡೆಸಲಿದ್ದಾರೆ.  ದೋಣಿ ಮಾಲಿಕರು ತಪಾಸಣೆ ವೇಳೆ ತಮ್ಮ ದೋಣಿ ಇಂಜಿನ್

ಸಮೇತ ದಾಖಲೆಗಳೊಂದಿಗೆ ತಪಾಸಣೆ ನಡೆಸಲು ಸಹಕರಿಸುವಂತೆ ಮೀನುಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರ ಕಚೇರಿ ಪ್ರಕಟಣೆ ತಿಳಿಸಿದೆ.

<><><>

ಯುವಶಕ್ತಿ ಅಣುಶಕ್ತಿಗಿಂತಲೂ ಮಿಗಿಲಾದದ್ದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ. ಬೆಂಗಳೂರಿನಲ್ಲಿ ಯುವ ಸಮ್ಮೇಳನ ಮತ್ತು ರಾಷ್ಟ್ರ ಹಾಗೂ ರಾಜ್ಯ ಯುವ ಪ್ರಶಸ್ತಿ ಪ್ರದಾನ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಯುವಜನರು ಸಂಕಲ್ಪ ಮಾಡಿದರೆ ಅಸಾಧ್ಯವಾದ್ದನ್ನೂ ಸಾಧ್ಯವಾಗಿಸಬಹುದು. ಹೀಗಾಗಿ ಯುವಜನರು ದೇಶದ ಪ್ರಗತಿಗೆ ಪಣತೊಡಬೇಕು ಕರೆ ನೀಡಿದ್ದಾರೆ.

<><><>

ರಾಜ್ಯದ ವಿವಿಧೆಡೆ ಇಂದು ಮಾಜಿ ಮುಖ್ಯಮಂತ್ರಿ ದಿವಂಗತ ಡಿ. ದೇವರಾಜ ಅರಸು ಅವರ ೧೧೦ನೇ ಜನ್ಮ ದಿನಾಚರಣೆ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾದ ಕಾರ್ಯಕ್ರಮದಲ್ಲಿ ದೇವರಾಜ ಅರಸು ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಪುಷ್ಪ ನಮನ ಸಲ್ಲಿಸಿದರು. ಅಲ್ಪಸಂಖ್ಯಾತರು, ಸಮಾಜಿಕವಾಗಿ ಹಿಂದುಳಿದ ಸಮುದಾಯದ ಜನರಿಗೆ ಬದುಕು ಕಟ್ಟಿಕೊಡಲು ಶ್ರಮಿಸಿದ ಮಹಾನ್ ನಾಯಕ ಡಿ.ದೇವರಾಜ ಅರಸು ಅವರು ಸಮಾಜದ ದೀಪ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಬಣ್ಣಿಸಿದರು. ಹಿಂದುಳಿದವರ ಸರ್ವತೋಮುಖ ಅಭಿವೃದ್ಧಿಗಾಗಿ ಹತ್ತು ಹಲವು ಕಾರ್ಯಕ್ರಮ ಹಮ್ಮಿಕೊಂಡು ದುರ್ಬಲ ವರ್ಗದ ಜನರ ಏಳಿಗೆಗೆ ಶ್ರಮಿಸಿದವರು ಡಿ.ದೇವರಾಜ ಅರಸು ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು. ಅರಸು ಅವರು ಬಹಳ ದೂರದೃಷ್ಟಿಯಿಂದ ಆಡಳಿತ ನಡೆಸಿ, ಮಹತ್ವದ ಯೋಜನೆ ಜಾರಿಗೊಳಿಸಿದ ಕಾರಣದಿಂದಲೇ ಇಂದಿಗೂ ಜನಮನ್ನಣೆ ಉಳಿಸಿಕೊಂಡಿದ್ದಾರೆ ಎಂದು ಕೊಡಗು ಜಿಲ್ಲಾಧಿಕಾರಿ ವೆಂಕಟ್ ರಾಜಾ ಅಭಿಪ್ರಾಯಪಟ್ಟಿದ್ದಾರೆ.

<><><>

ಸದ್ಭಾವನಾ ದಿನಾಚರಣೆಯ ಅಂಗವಾಗಿ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಸೌಧದ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ದ್ಭಾವನಾ ದಿನದ ಅಂಗವಾಗಿ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಪ್ರತಿಜ್ಞಾ ವಿಧಿ ಸ್ವೀಕಾರ ಕಾರ್ಯಕ್ರಮ ನಡೆಯಿತು. ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಪ್ರತಿಜ್ಞಾ ವಿಧಿಯನ್ನು ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗೆ ಬೋಧಿಸಿದರು.

<><><>

ವಿಜಯಪುರ ಜಿಲ್ಲೆಯಲ್ಲಿ ಏಪ್ರಿಲ್ ತಿಂಗಳಿನಿಂದ ಜುಲೈ ಅಂತ್ಯದವರೆಗೆ ೨೭೭ ಕ್ವಿಂಟಾಲ್ ಅಕ್ಕಿ ಹಾಗೂ ೯ ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಆಹಾರ ಇಲಾಖೆಯ ಉಪನಿರ್ದೇಶಕ ವಿನಯ್ ಕುಮಾರ್ ಪಾಟೀಲ್ ತಿಳಿಸಿದ್ದಾರೆ. ಅಕ್ಕಿ ಕಳ್ಳ ಸಾಗಾಣಿಕೆಯ ವೇಳೆ ವಶಪಡಿಸಿಕೊಂಡ ಅಕ್ಕಿಯ ಬೆಲೆ ಒಟ್ಟು ೭ ಲಕ್ಷ ೮೦ ಸಾವಿರ ರೂಪಾಯಿ ಎಂದು ಅವರು ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>